# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | | 170 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಕೆ.ಎ ತಿಪ್ಪೇಸ್ವಾಮಿ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 13-09-2021 |
| | ಪ್ರಶ್ನೆ | ಉತ್ತರ |
| (ಅ) | ರಾಷ್ಟ್ರೀಯ ಶಿಕ್ಷಣ ನೀತಿ-2020ನ್ನು ಯಾವ ವರ್ಷದಿಂದ ಜಾರಿಗೆ ತರಲು ಉದ್ದೇಶಿಸಲಾಗಿದೆ; | ರಾಷ್ಟ್ರೀಯ ಶಿಕ್ಷಣ ನೀತಿ-2020ನ್ನು 2021-22ನೇ ಶೈಕ್ಷಣಿಕ ವರ್ಷದಿಂದ ಜಾರಿಗೆ ತರಲಾಗಿದೆ. |
| (ಆ) | ರಾಷ್ಟ್ರೀಯ ಶಿಕ್ಷಣ ನೀತಿ-2020ನ್ನು ಜಾರಿಗೊಳಿಸಲು ಕರ್ನಾಟಕ ರಾಜ್ಯ ಸರ್ಕಾರ ಗುರುತಿಸಿರುವ ನೋಡಲ್ ಏಜೆನ್ಸಿಗಳು ಯಾವುವು ಮತ್ತು ಈ ಏಜೆನ್ಸಿಗಳು ಹಮ್ಮಿಕೊಂಡಿರುವ ಮತ್ತು ಸಾಧಿಸಿರುವ ಕಾರ್ಯಕ್ರಮಗಳು ಮತ್ತು ಯೋಜನೆಗಳ ವಿವರ ನೀಡುವುದು; | ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸಹಯೋಗದೊಂದಿಗೆ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳನ್ನು ನೋಡಲ್ ಏಜೆನ್ಸಿಗಳನ್ನಾಗಿ ಗುರುತಿಸಲಾಗಿದೆ. ಸದರಿ ವಿಶ್ವವಿದ್ಯಾಲಯಗಳ ಅಡಿಯಲ್ಲಿ ಬರುವ ಕಾಲೇಜುಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸರ್ಕಾರದ ಹಾಗೂ ಯುಜಿಸಿ ಮಾರ್ಗಸೂಚಿಗಳನುಸಾರ ಜಾರಿಗೆ ತರಲು ಹಲವಾರು ಕಾರ್ಯಕ್ರಮಗಳನ್ನು ಸೆಮಿನಾರ್, ಕಾರ್ಯಗಾರ, ತರಬೇತಿ, ವಿಷಯ ತಜ್ಞರ ಮೂಲಕ ಕೈಗೊಳ್ಳಲಾಗುತ್ತಿದೆ.<br><br>ಕರ್ನಾಟಕ ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡದಿಂದ ರಾಜ್ಯದ ಎಲ್ಲಾ ಬೋಧಕರಿಗೆ ಹಂತ ಹಂತವಾಗಿ ತರಬೇತಿ ನೀಡಲು ವ್ಯವಸ್ಥೆ ಮಾಡಲಾಗಿದೆ. ಇದಲ್ಲದೇ, ಹಲವು ವಿಶ್ವವಿದ್ಯಾಲಯಗಳಲ್ಲಿರುವ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳ (ಹಿಂದಿನ ಅಕಾಡೆಮಿಕ್ ಸ್ಟಾಫ್ ಕಾಲೇಜು)ಗಳ ಮುಖಾಂತರ ತರಬೇತಿ ನೀಡಲಾಗುವುದು. |
| (ಇ) | ಶಿಕ್ಷಣ ಹಕ್ಕು ಕಾಯಿದೆ-2009ರಂತೆ ಹೊಸ ಶಿಕ್ಷಣ ನೀತಿಯಲ್ಲಿ ಅವಕಾಶ ಕಲ್ಪಿಸಲಾಗಿದೆಯೇ; | ಅವಕಾಶ ಕಲ್ಪಿಸಲಾಗಿದೆ. |
| (ಈ) | ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಯಾವುದೇ ಪೂರ್ವ ಸಿದ್ಧತೆ ಇಲ್ಲದೆ, ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಶಾಲಾ-ಕಾಲೇಜುಗಳಲ್ಲಿ ನಿರ್ಮಿಸದೇ ಮತ್ತು ಅಗತ್ಯವಿರುವ ತರಬೇತಿ ಹೊಂದಿದ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಸರ್ಕಾರಿ ಮತ್ತು ಖಾಸಗಿ ವಲಯಗಳಲ್ಲಿ ನೇಮಿಸದೇ, ತರಾತುರಿಯಲ್ಲಿ ಜಾರಿಗೆ ತರಲು ಮುಂದಾಗಿರುವುದರಿಂದ ವಿದ್ಯಾರ್ಥಿಗಳಲ್ಲಿ ಅಧ್ಯಾಪಕರುಗಳಲ್ಲಿ ಮತ್ತು ಪೋಷಕರುಗಳಲ್ಲಿ ಗೊಂದಲ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು) | ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಮುನ್ನ ಕಾರ್ಯಪಡೆಯನ್ನು ರಚಿಸಲಾಗಿದ್ದು, ಕಾರ್ಯಪಡೆಯ ಅನುಷ್ಠಾನ ವರದಿಯಂತೆ ಸಚಿವ ಸಂಪುಟದ ಅನುಮೋದನೆಯಾಗಿರುತ್ತದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಮುನ್ನ ಸಾಧಕ-ಬಾಧಕಗಳ ಬಗ್ಗೆ ಚರ್ಚಿಸಲಾಗಿದ್ದು, ವಿಷಯ ತಜ್ಞರು ಹಾಗೂ ವಿಶ್ವವಿದ್ಯಾಲಯಗಳ ಕುಲಪತಿಗಳು, ಶಾಲಾ - ಕಾಲೇಜುಗಳ ಪ್ರಾಂಶುಪಾಲರು ಮತ್ತು ಬೋಧಕ ಸಿಬ್ಬಂದಿ ವರ್ಗದವರೊಂದಿಗೆ ವಿಸ್ತೃತವಾಗಿ ಚರ್ಚಿಸಿ/ಸಮಾಲೋಚಿಸಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ತೀರ್ಮಾನಿಸಿ ಆದೇಶಿಸಿದೆ. ಹತ್ತು ವರ್ಷಗಳ ಕಾಲದ ಯೋಜನೆಯ ಪ್ರಾರಂಭಕ್ಕೆಬೇಕಾದ ಸಿದ್ಧತೆ ಮಾಡಿಕೊಳ್ಳಲಾಗಿದೆ.<br>ತರಾತುರಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತರುತ್ತಿಲ್ಲ. ಹೊಸ ರಾಷ್ಟ್ರೀಯ ಶಿಕ್ಷಣ ನೀತಿ-2020ರ ಪಠ್ಯಕ್ರಮ ಹಾಗೂ ಬೋಧನಾ ವಿಧಾನಗಳು ಮತ್ತು ಆಡಳಿತಾತ್ಮಕ ಬದಲಾವಣೆಗಳ ಬಗ್ಗೆ ಶಿಫಾರಸ್ಸುಗಳನ್ನು |

| | | |
|---|---|---|
| | | ಮಾಡಿರುತ್ತದೆ. ಆದರಂತೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಶಿಕ್ಷಣ ನೀತಿ-2020ರನ್ವಯ 297 ಕಾರ್ಯಗಳನ್ನು ಗುರುತಿಸಿ ಸಮಯ ಸೂಚಿಯೊಂದಿಗೆ ಎಲ್ಲಾ ರಾಜ್ಯಗಳಿಗೆ ನೀಡಿದ್ದು, ರಾಜ್ಯದಲ್ಲಿ ಪೂರ್ವ ಬಾಲ್ಯಾವಸ್ಥೆ ಆರೈಕೆ ಮತ್ತು ಶಿಕ್ಷಣ, ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ, ಶಿಕ್ಷಕರ ತರಬೇತಿ ಪಠ್ಯಕ್ರಮ ಮತ್ತು ಬೋಧನಾವಿಧಾನ ಕ್ಷೇತ್ರದಲ್ಲಿ ಈ ಕಾರ್ಯಸೂಚಿಗಳ ಅನುಷ್ಠಾನಕ್ಕಾಗಿ ಕಾರ್ಯ ಪ್ರವೃತ್ತವಾಗಿರುತ್ತದೆ. ಹೊಸ ಶಿಕ್ಷಣ ನೀತಿ ಹಂತ ಹಂತವಾಗಿ ಜಾರಿಗೆ ಬರುವುದರಿಂದ ಯಾವುದೇ ಗೊಂದಲ ಉಂಟಾಗುವ ಸಾಧ್ಯತೆ ಕಡಿಮೆ ಇದೆ.<br>ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯು ವಿದ್ಯಾರ್ಥಿ ಸ್ನೇಹಿಯಾಗಿ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು ಕೊಡುತ್ತದೆ. ಅಂದರೆ, ಅವರ ಸಂಪೂರ್ಣ ವ್ಯಕ್ತಿತ್ವ ರೂಪಿಸುವುದಲ್ಲದೇ ಅವರನ್ನು ಉದ್ಯೋಗಾರ್ಹರನ್ನಾಗಿ ಮಾಡಲು ಒತ್ತು ಕೊಡುತ್ತದೆ. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ತಂದು ಉನ್ನತ ಶಿಕ್ಷಣವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಆಶಯವನ್ನಿಟ್ಟುಕೊಂಡಿದೆ. ರಾಷ್ಟ್ರೀಯ ಶಿಕ್ಷಣ ನೀತಿಯು ಪ್ರವೇಶ, ಸಮಾನತೆ ಮತ್ತು ಒಳಗೊಳ್ಳುವಿಕೆಗೂ (Access, equity and inclusiveness) ಒತ್ತು ಕೊಡುತ್ತದೆ. |
| (ಉ) | ಗ್ರಾಮಾಂತರ ಪ್ರದೇಶದಲ್ಲಿರುವ ಮಕ್ಕಳ ನಲಿ-ಕಲಿ ಮತ್ತು ಪ್ರಾರಂಭಿಕ ವಿದ್ಯಾಭ್ಯಾಸದ ಬಗ್ಗೆ ಸರ್ಕಾರ ಎಲ್ಲಾ ರೀತಿಯ ಸವಲತ್ತುಗಳನ್ನು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯಂತೆ ಕಲ್ಪಿಸಲು ಕೈಗೊಂಡಿರುವ ಕಾರ್ಯಕ್ರಮಗಳು ಮತ್ತು ಯೋಜನೆಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕದಲ್ಲಿ ನಲಿ-ಕಲಿ ಪದ್ಧತಿಯು ಬುನಾದಿ ಸಾಕ್ಷರತೆ ಸಂಖ್ಯಾಜ್ಞಾನ ಹಂತದ ಪದ್ಧತಿಯಾಗಿದ್ದು, ಸದರಿ ಬೋಧನಾ ಪದ್ಧತಿಯನ್ನು ತರಗತಿಗಳಲ್ಲಿ ಅನುಷ್ಠಾನಗೊಳಿಸಲು ಕ್ರಿಯಾಯೋಜನೆಗಳು, ಪಠ್ಯಕ್ರಮ, ಕಲಿಕಾ ಫಲಗಳು, ಇತ್ಯಾದಿ ಸಿದ್ಧತೆಗಳನ್ನು ಪ್ರಾರಂಭಿಸಲಾಗಿದೆ.<br>ಪ್ರಾರಂಭಿಕ ವಿದ್ಯಾಭ್ಯಾಸದ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಶಿಕ್ಷಣ ಇಲಾಖೆಗಳ ಮೂಲಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. |

ಸಂಖ್ಯೆ: ಇಡಿ 224 ಯುಎನ್ಇ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.